# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 55
ಮಾನ್ಯ ಸದಸ್ಯರ ಹೆಸರು : ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 07.12.2020
ಉತ್ತರಿಸಬೇಕಾದ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ | ನಗರದಲ್ಲಿ ಕೋವಿಡ್ -19ರ ಸೋಂಕಿತರನ್ನು ವಿವಿಧ ಖಾಸಗಿ ಏಜೆನ್ಸಿಗಳು ಸಂಪರ್ಕಿಸಿ ಕಟ್ಟಡಗಳಿಗೆ ಸೋಂಕು ನಿವಾರಣಾ ದ್ರವ ಸಿಂಪಡಣೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸುವುದಾಗಿ ದುಂಬಾಲು ಬೀಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೋವಿಡ್ 19 ಸೋಂಕಿತರನ್ನು ಖಾಸಗಿ ಏಜೆನ್ಸಿಗಳು ಸಂಪರ್ಕಿಸುವುದು ಹಾಗೂ ಕಟ್ಟಡಗಳಿಗೆ ಸೋಂಕು ನಿವಾರಣಾ ದ್ರವ ಸಿಂಪಡಣೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸುವ ಕುರಿತು, ಸರ್ಕಾರದಿಂದ ಯಾವುದೇ ಮಾರ್ಗಸೂಚಿಗಳನ್ನು ಹೊರಡಿಸಿರುವುದಿಲ್ಲ. ಸೋಂಕು ನಿವಾರಣಾ ದ್ರವ ಸಿಂಪಡಣೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸುವ ಕುರಿತು, ಸೋಂಕಿತರಿಗೆ ದುಂಬಾಲು ಬೀಳುವ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಆ | ಕೋವಿಡ್ ಪೀಡಿತರ ಮಾಹಿತಿಯಲ್ಲಿ ಗೌಪ್ಯತೆ ಕಾಪಾಡದೆ ಖಾಸಗಿ ಏಜೆನ್ಸಿಗಳಿಗೆ ಮಾಹಿತಿ ಲಭ್ಯವಾಗುತ್ತಿರುವುದಕ್ಕೆ ಕಾರಣರ್ಯಾರು; | ಕೋವಿಡ್ ಪೀಡಿತರ ಮಾಹಿತಿಯ ಕುರಿತು ಅಗತ್ಯ ಗೌಪ್ಯತೆಯನ್ನು ಕಾಪಾಡಿಕೊಳ್ಳಲಾಗಿದೆ ಹಾಗೂ ಯಾವುದೇ ಖಾಸಗಿ ಏಜೆನ್ಸಿಗಳಿಗೆ ಈ ಕುರಿತು ಮಾಹಿತಿ ಸೋರಿಕೆಯಾಗಿರುವುದಿಲ್ಲ.<br>ಮುಂದುವರೆದು, ವೈದ್ಯಕೀಯ ಸಂಶೋಧನಾ ಸಂಸ್ಥೆಗಳಿಗೆ ಕೋವಿಡ್ ಪೀಡಿತರ ಮಾಹಿತಿಯನ್ನು ನೀಡುವ ಸಂದರ್ಭದಲ್ಲಿ **Memorandum of Understanding (MoU)** ನ ಅನ್ವಯ ಇಲಾಖೆಯು ನೀಡಿದ ಮಾಹಿತಿಯನ್ನು ಸಂಶೋಧನಾ ಚಟುವಟಿಕೆಗಳಿಗೆ ಮಾತ್ರವೇ ಬಳಸುವಂತೆ ಹಾಗೂ ಖಾಸಗಿಯವರಿಗೆ ಸೋರಿಕೆಯಾಗದಂತೆ ಕ್ರಮವಹಿಸಿ ಷರತ್ತನ್ನು ವಿಧಿಸಲಾಗುತ್ತಿದೆ. ಹಾಗೂ ಮಾಹಿತಿಯು ಸೋರಿಕೆಯಾಗದಂತೆ ಖಚಿತಪಡಿಸಿಕೊಳ್ಳಲಾಗುತ್ತಿದೆ. |
| ಇ | ಮಾಹಿತಿ ಗೌಪ್ಯತೆಯನ್ನು ಕಾಪಾಡದಿದ್ದರೆ ಅದು ಅಪರಾಧವಾಗುವುದಿಲ್ಲವೇ; ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿ/ ಸಿಬ್ಬಂದಿಯವರ ವಿರುದ್ಧ ಯಾವ ಕ್ರಮಕೈಗೊಳ್ಳಲಾಗಿದೆ? (ವಿವರ ನೀಡುವುದು) | ಹೌದು. ಮಾಹಿತಿಯ ಗೌಪ್ಯತೆಯನ್ನು ಕಾಪಾಡದಿರುವುದು ಅಪರಾಧವಾಗುತ್ತದೆ. ಮುಂದುವರೆದು, ಈವರೆಗೆ ಕೋವಿಡ್ ಪೀಡಿತರ ಮಾಹಿತಿಯು ಸೋರಿಕೆಯಾಗದಿರುವ ಹಿನ್ನಲೆಯಲ್ಲಿ ಅಧಿಕಾರಿ / ಸಿಬ್ಬಂದಿಯವರ ವಿರುದ್ಧ ಕ್ರಮ ಕೈಗೊಳ್ಳುವ ಪ್ರಶ್ನೆಯು ಉದ್ಭವಿಸುವುದಿಲ್ಲ. |

**ಸಂಖ್ಯೆ: ಆಕುಕ 133 ಎಸ್‌ಎಂಎಂ 2020**

**(ಡಾ||ಕೆ.ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು